ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ

ಸಂ:ವಿಪತ್ತು ನಿರ್ವಹಣೆ:ಕೋವಿಡ್-19:ಸಿಆರ್-1/2020-21 ದಿನಾಂಕ:31-05-2020

## :: ಆದೇಶ ::

ಕೋವಿಡ್-19 ರೋಗ ತಡೆ ಹಿನ್ನಲೆಯಲ್ಲಿ ಕೇಂದ್ರ ಸರ್ಕಾರದ ಆದೇಶ ಸಂಖ್ಯೆ 40-3/ 2020-ಡಿಎಂ-1(ಎ) ದಿ:30-05-2020ರ ಆದೇಶವನ್ನು ಅನುಸರಿಸಿ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಕಂಇ 158 ಟಿಎನ್‌ಆರ್ 2020, ದಿನಾಂಕ:30-5-2020ರಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಕಂಟೈನ್‌ಮೆಂಟ್ ಜೋನ್‌ಗಳಲ್ಲಿ ದಿ:30-06-2020 ರವರೆಗೆ ಲಾಕ್‌ಡೌನ್ ಅನ್ನು ಮುಂದುವರೆಸಿ, ಹಾಗೂ ಕಂಟೈನ್‌ಮೆಂಟ್ ಹೊರತುಪಡಿಸಿದ ಸ್ಥಳಗಳಲ್ಲಿ ಹಂತವಾರು ನಿಷೇದಿತ ಚಟುವಟಿಕೆಗಳನ್ನು ಪ್ರಾರಂಭಿಸಲು ಲಾಕ್‌ಡೌನ್ ಅನ್ನು ಸಡಿಲಗೊಳಿಸಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದಲ್ಲಿ ಹಂತವಾರು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ವಿವರಗಳನ್ನು ನೀಡಿದ್ದು, ಈ ಆದೇಶದಲ್ಲಿನ ಮಾರ್ಗಸೂಚಿಗಳು ಯಥಾವತ್ತು ಜಿಲ್ಲೆಯಲ್ಲಿ ತಕ್ಷಣದಿಂದಲೇ ಅನ್ವಯವಾಗುವಂತೆ ದಿ:30-06-2020 ರವರೆಗೆ ಜಾರಿಯಲ್ಲಿರುತ್ತದೆ.

ಸರ್ಕಾರದ ಆದೇಶದಲ್ಲಿ ಪ್ರಸ್ತಾಪಿಸಿರುವ ಚಟುವಟಿಕೆಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಚಟುವಟಿಕೆಗಳನ್ನು ಸಾಮಾಜಿಕ ಅಂತರ ಹಾಗೂ ಸೂಕ್ತ ಎಚ್ಚರಿಕಾ ಕ್ರಮಗಳನ್ನು ಅನುಸರಿಸಿ ಮುಂದುವರೆಸಲು ಅವಕಾಶ ನೀಡಲಾಗಿದೆ. ವೈಯಕ್ತಿಕ ಓಡಾಟಗಳು, ಅನಿವಾರ್ಯವಲ್ಲದ ಚಟುವಟಿಕೆಗಳ ಕಾರ್ಯನಿರ್ವಹಣೆಯು ರಾತ್ರಿ 9.00 ರಿಂದ ಮುಂಜಾನೆ 5.00ರವರಗೆ ಕಡ್ಡಾಯವಾಗಿ ನಿಷೇಧಿಸಿ ಸಿ.ಆರ್.ಪಿ.ಸಿ ಸೆಕ್ಷನ್ 144 ಜಾರಿಗೊಳಿಸಲಾಗಿರುತ್ತದೆ. ಈ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ-2005 ಮತ್ತು ಭಾರತೀಯ ದಂಡ ಸಂಹಿತೆಯನ್ವಯ ಸೂಕ್ತ ಕಾನೂನು ಕ್ರಮಕ್ಕೆ ಒಳಪಡಿಸಲಾಗುವುದು.

(ಆರ್.ವಿನೋತ್ ಪ್ರಿಯಾ)
ಜಿಲ್ಲಾಧಿಕಾರಿಗಳು
ಚಿತ್ರದುರ್ಗ ಜಿಲ್ಲೆ

**ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ:-**

1) ಜಿಲ್ಲಾ ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ
3) ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ
4) ಯೋಜನಾ ನಿರ್ದೇಶಕರು, ಡಿ.ಯು.ಡಿ.ಸಿ, ಚಿತ್ರದುರ್ಗ
5) ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರ್‌ಗಳು
6) ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು
7) ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ಮುಖ್ಯಾಧಿಕಾರಿಗಳು
8) ಜಿಲ್ಲಾ ವಾರ್ತಾ & ಪ್ರಚಾರಾಧಿಕಾರಿಗಳು, ಚಿತ್ರದುರ್ಗ

Scanned with CamScanner